ಪ್ರಸ್ತಾವದ ಅಂಗೀಕಾರ

ಶ್ರೀ ಎಂ. ವೀರಪ್ಪ ಮೊಯಿಲಿ.—೧೯೯೦ನೇ ಇಸವಿಯ ಕರ್ನಾಟಕ ಕೃಷಿ ವರಮಾನ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ,

''೧೯೯೦ನೇ ಇಸವಿಯ ಕರ್ನಾಟಕ ಕೃಷಿ ವರಮಾನ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

೧೯೯೦ನೇ ಇಸವಿ ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ. ವೀರಪ್ಪ ಮೊಯ್ಲಿ (ಅನ್ಯ ಕಾನೂನು, ವಾರ್ತಾ ಹಾಗೂ ಪ್ರವಾಸೋದ್ಯಮ ಖಾತೆಗಳ ಮಂತ್ರಿಗಳು).—ಅನ್ಯ ಅಧ್ಯಕ್ಷರೇ, ೧೯೯೦ನೇ ಇಸವಿಯ ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು.— ಪ್ರಸ್ತಾವ ಏನೆಂದರೆ ''೧೯೯೦ನೇ ಇಸವಿಯ ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು''.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ ೨ ರಿಂದ ೫ರವರೆಗೆ

ಅಧ್ಯಕ್ಷರು.— ''ಖಂಡ ೨ ರಿಂದ ೫ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ೨ ರಿಂದ ೫ರವರೆಗೆ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು

ಖಂಡ ೧ ಇತ್ಯಾದಿ

ಅಧ್ಯಕ್ಷರು.— ಪ್ರಸ್ತಾವ ಏನೆಂದರೆ: ''ಮೊದಲನೇ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ''

ಪ್ರಸ್ತಾವವನ್ನು ಅಂಗೀಕರಿಸಲಾಯಿತು

ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು

ಪ್ರಸ್ತಾವದ ಅಂಗೀಕಾರ

ಶ್ರೀ ಎಂ. ವೀರಪ್ಪ ಮೊಯ್ಲಿ.—''೧೯೯೦ನೇ ಇಸವಿಯ ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ''.

ಅಧ್ಯಕ್ಷರು.— ಪ್ರಸ್ತಾವ ಏನೆಂದರೆ '. ೧೯೯೦ನೇ ಇಸವಿಯ ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

೧೯೯೦ನೇ ಇಸವಿಯ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ. ವೀರಪ್ಪ ಮೊಯ್ಲಿ (ಕಾನೂನು, ಸಂಸದೀಯ ವ್ಯವಹಾರ, ವಾರ್ತಾ ಹಾಗೂ ಪ್ರವಾಸೋದ್ಯಮ ಸಚಿವರು).— ಮಾನ್ಯ ಅಧ್ಯಕ್ಷರೇ, ಮಾನ್ಯ ಹಣಕಾಸಿನ ಸಚಿವರ ಪರವಾಗಿ ೧೯೯೦ರ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಛೇರ್ಮನ್.— ಪ್ರಸ್ತಾವ ಏನೆಂದರೆ: .. ೧೯೯೦ರ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ ೨ ರಿಂದ ೮ರವರೆಗೆ

ಛೇರ್ಮನ್.— ಪ್ರಸ್ತಾವ ಏನೆಂದರೆ:

'.ಖಂಡ ೨ರಿಂದ ೮ರವರೆಗೆ ಎರಡೂ ಸೇರಿದಂತೆ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ೨ ರಿಂದ ೮ ರವರೆಗೆ ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು

ಖಂಡ ೯

ಶ್ರೀ ಎಂ. ವೀರಪ್ಪ ಮೊಯಿಲಿ.— ಖಂಡ ೯ಕ್ಕೆ ನಾನು ಈ ಕೆಳಕಂಡ ತಿದ್ದುಪಡಿಯನ್ನು ಮಂಡಿಸುತ್ತೇನೆ.

'' That in Clause 9, in sub-clause (viii), in the entries relating to Serial No. 22, for the words 'Four percent', the words 'Two percent' shall be substituted.

ಛೇರ್ಮನ್:—ಪ್ರಸ್ತಾವ ಏನೆಂದರೆ:

'. In Clause 9, in sub-clause (viii), in the entries relating to Serial No.22, for the words 'Four percent', the words 'Two percent', shall be substituted.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ೯ ತಿದ್ದುಪಡಿಯಾದ ರೀತಿಯಲ್ಲಿ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು